ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ ಕೊಪ್ಪಳ

ಸಿ.ಸಿ.ನಂಃ 1876/2023

ಚಾಸಾಃ( 03 ) ಪ್ರಾಸಾ ( 02 )

ಸಾಕ್ಷಿಗೆ ಪ್ರಮಾಣ ಭೋದಿಸಲಾಯಿತು.

ದಿನಾಂಕಃ 16-07-2024

| | |
|---|---|
| ಸಾಕ್ಷಿದಾರರ ಹೆಸರು | ಕಿರಣ್ |
| ತಂದೆ ಹೆಸರು | ಲೇಪಣ್ಣ |
| ವಯಸ್ಸು | 23 ವರ್ಷ |
| ಉದ್ಯೋಗ | ವ್ಯಾಪಾರ |
| ವಾಸಸ್ಥಳ | ಕಿನ್ನಾಳ |

**ಮುಖ್ಯ ವಿಚಾರಣೆಃ ಸಸಅ ರವರಿಂದ:**

ನನಗೆ ಚಾಸಾ 2 ರವರ ಪರಿಚಯ ಇರುವುದಿಲ್ಲ. ಸುಮಾರು 1-2 ವರ್ಷಗಳ ಹಿಂದೆ ನಾನು ನನ್ನ ಕೆಲಸದ ನಿಮಿತ್ಯ ಪೋಲಿಸ್ ಠಾಣೆಗೆ ಹೋದಾಗ ಪೋಲಿಸರು ನನ್ನ ಸಹಿ ತೆಗದುಕೊಂಡಿದ್ದಾರೆ. ಪೋಲಿಸರು ನನ್ನ ಸಮಕ್ಷಮದಲ್ಲಿ ದಾಳಿ ಮಾಡಿ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಯಾವುದೇ ಮದ್ಯದ ಬಾಟಲಿಗಳನ್ನು ವಶಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ನಿಪಿ-2 ಪಂಚನಾಮೆಯಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-ರ 2 (ಬಿ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಎನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿದಾರ ಅಭಿಯೋಜನೆಯ ಕೇಸಿಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದಾರೆ ಅಂತ ಹಿಸಸಅ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಕೋರಿಕೊಂಡಿದ್ದು, ಪಾಟೀಸವಾಲಿಗೆ ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 12-12-2022 ರಂದು ಮ. 01.20 ರಿಂದ 02.20 ರ ಸಮಯದಲ್ಲಿ ಪೋಲಿಸರು ನನ್ನನ್ನು ವಡದಾಳ ಗ್ರಾಮದ ಸಾರ್ವಜನಿಕ ಸ್ಥಳಕ್ಕೆ ಕರೆದುಕೊಂಡು ಹೋಗಿ ನನ್ನ ಸಮಕ್ಷಮ ದಾಳಿ ಮಾಡಿ ಆರೋಪಿಯಿಂದ ಪಂಚನಾಮೆಯಲ್ಲಿನ ತೋರಿಸಿದ ಮದ್ಯಗಳನ್ನು ಅಕ್ರಮವಾಗಿ ಮಾರಾಟ ಮಾಡುತ್ತಿದ್ದು, ನನ್ನ ಸಮಕ್ಷಮ ಪಂಚನಾಮೆ ಮಾಡಿ ಸ್ಥಳದಲ್ಲಿ ನನ್ನ ಸಹಿಯನ್ನು ಪಡೆದುಕೊಂಡಿರುವರು ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದ**

ಏನೂ ಇಲ್ಲ.

ಮರು ವಿಚಾರಣೆ ಇಲ್ಲ.

(ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ ಎಂದು ಒಪ್ಪಿರುತ್ತಾರೆ

ಹೆ. **ಜೆ ಎಂ ಎಫ್ ಸಿ ಕೊಪ್ಪಳ.**